ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ:ಸಿ4(2):ಸುತ್ತೋಲೆ:04:2010-11 ದಿನಾಂಕ:10/11/2017

**:ಸುತ್ತೋಲೆ:**

ವಿಷಯ: ದಿನಾಂಕ:11.11.2017ರಂದು ಮೊಟ್ಟ ಮೊದಲ ಶಿಕ್ಷಣ ಸಚಿವರಾದ ಭಾರತ ರತ್ನ ಡಾ.ಮೌಲಾನಾ ಅಬುಲ್ ಕಲಾಂ ಆಜಾದ್ ರವರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಶಿಕ್ಷಣ ದಿನಾಚರಣೆಯನ್ನಾಗಿ ಆಚರಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ:11.11.2017 ರಂದು ಭಾರತದ ಮೊಟ್ಟ ಮೊದಲ ಶಿಕ್ಷಣ ಸಚಿವರಾದ ಭಾರತ ರತ್ನ ಡಾ.ಮೌಲಾನಾ ಅಬುಲ್ ಕಲಾಂ ಆಜಾದ್ ರವರ ಜನ್ಮದಿನದ ಅಂಗವಾಗಿ ರಾಜ್ಯದ ಎಲ್ಲಾ ಶಾಲೆಗಳಲ್ಲಿ **ರಾಷ್ಟ್ರೀಯ ಶಿಕ್ಷಣ ದಿನವನ್ನಾಗಿ** ಆಚರಿಸಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸದರಿಯವರ ಜನ್ಮ ದಿನಾಚರಣೆಯನ್ನು ಆಚರಿಸುವುದರ ಜೊತೆಗೆ ಅವರ ಜೀವನ ಮತ್ತು ಸಾಧನೆಯ ಬಗ್ಗೆ ಮಕ್ಕಳಿಗೆ ತಿಳಿಸುವುದು ನಮ್ಮ ಆದ್ಯತೆಯಾಗಿರುತ್ತದೆ. ಈ ಸಂಬಂಧ ಕೆಳಕಂಡ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದರ ಮೂಲಕ ಸದರಿಯವರ ಜನ್ಮದಿನವನ್ನು ಯಶಸ್ವಿಯಾಗಿ **ಶಾಲೆಗಳಲ್ಲಿ ದಿನಾಂಕ:11.11.2017ರ ದಿನವನ್ನು ರಾಷ್ಟ್ರೀಯ ಶಿಕ್ಷಣ ದಿನವನ್ನಾಗಿ** ಆಚರಿಸಲು ಸೂಚಿಸಿದೆ.

1. ರಾಜ್ಯದ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಭಾರತ ರತ್ನ ಡಾ.ಮೌಲಾನಾ ಅಬುಲ್ ಕಲಾಂ ಆಜಾದ್ ರವರ ಜನ್ಮದಿನದ ಅಂಗವಾಗಿ ಅವರ ಬಗ್ಗೆ ವಿಚಾರ ಸಂಕೀರ್ಣಗಳು, ಪ್ರಬಂಧ ರಚನೆ, ಕಾರ್ಯಾಗಾರಗಳು, ಹಾಗೂ ಜಾಥಾಗಳನ್ನು ಹಮ್ಮಿಕೊಳ್ಳುವುದು.
2. ಸಾಕ್ಷರತೆಯ ಪ್ರಾಮುಖ್ಯತೆ ಹಾಗೂ ಶಿಕ್ಷಣದ ಬಗ್ಗೆ ರಾಷ್ಟ್ರದ ಬದ್ಧತೆಗಳ **ಹೇಳಿಕೆಗಳ** ಮೂಲಕ ಬಿತ್ತಿ ಪತ್ರಗಳನ್ನು ಪ್ರದರ್ಶಿಸುವುದು.
3. ರಾಷ್ಟ್ರದ ಶಿಕ್ಷಣ ಸಂಸ್ಥೆಗಳನ್ನು ಬಲಗೊಳಿಸುವುದು ಹಾಗೂ ಶಿಕ್ಷಣದ ಗುಣಮಟ್ಟವನ್ನು ಮೇಲ್ಮಟ್ಟಕ್ಕೆ ಕೊಂಡ್ಯೂಯುವ ನಿಟ್ಟಿನಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.
4. ಈ ಸಂದರ್ಭದಲ್ಲಿ ಭಾರತ ರತ್ನ ಡಾ.ಮೌಲಾನಾ ಅಬುಲ್ ಕಲಾಂ ಆಜಾದ್ ರವರು ಶೈಕ್ಷಣಿಕ ಪದ್ಧತಿಗೆ ತಮ್ಮ ಅಮೂಲ್ಯವಾದ ಕೊಡುಗೆಗಳ ಮೂಲಕ ಭದ್ರ ಬುನಾದಿ ಹಾಕಿರುವುದನ್ನು ಪುನರ್ ನೆನಪಿಸಿಕೊಳ್ಳುವುದು.

Kulomush

ನಿರ್ದೇಶಕರು (ಪ್ರೌಢಶಿಕ್ಷಣ)

ಗೆ,

1.ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರಿಗೆ ಮುಂದಿನ ಕ್ರಮಕ್ಕಾಗಿ.

2.ಕಛೇರಿ ಪ್ರತಿ.